ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ ನ್ಯಾಯಾಲಯ, ಮೂಡಿಗೆರೆ

ಸಿ.ಸಿ. ಸಂಖ್ಯೆ: **480/2025**

ಪಿರ್ಯಾದಿ : ಹೆಚ್.ಆರ್.ನಾಗರಾಜ್,
ವಯಸ್ಸು ಸುಮಾರು 62 ವರ್ಷ,
ಬಿನ್ ಹೆಚ್.ಎ. ರಾಮೇಗೌಡ,
ವಾಸ: ಕೆ.ಎಂ.ರಸ್ತೆ, ಬಿಳಗುಳ, ಹೆಸ್ಗಲ್ ಅಂಚೆ,
ಮೂಡಿಗೆರೆ ತಾಲ್ಲೂಕು,
ಚಿಕ್ಕಮಗಳೂರು ಜಿಲ್ಲೆ.

ವಿರುದ್ಧ

ಆರೋಪಿ : ಆರ್.ಕೃಷ್ಣ,
ವಯಸ್ಸು ಸುಮಾರು 52 ವರ್ಷ,
ಬಿನ್ ರಾಘವ,
ವಾಸ: ಶಿವಾಜಿನಗರ, ಬಿಳಗುಳ, ಹೆಸ್ಗಲ್ ಅಂಚೆ,
ಮೂಡಿಗೆರೆ ತಾಲ್ಲೂಕು,
ಚಿಕ್ಕಮಗಳೂರು ಜಿಲ್ಲೆ.

ಆಪಾದನೆಯ ಸಾರಾಂಶ

ಶ್ರೀ ವಿಶ್ವನಾಥ್ ಎ., ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ ನ್ಯಾಯಾಲಯ, ಮೂಡಿಗೆರೆ, ಆದ ನಾನು, ಆರೋಪಿಯಾದ ನಿಮ್ಮ ಮೇಲೆ ಮಾಡುವ ಆಪಾದನೆ ಏನೆಂದರೆ:-

ಆರೋಪಿಯಾದ ನೀವು ಪಿರ್ಯಾದುದಾರರನ್ನು ದಿನಾಂಕ 09.05.2024 ರಂದು ಸಂಪರ್ಕಿಸಿ, ನಿಮ್ಮ ಕುಟುಂಬದ ತುರ್ತು ಅವಶ್ಯಕತೆಗಳಿಗಾಗಿ ಹಾಗೂ ನಿಮ್ಮ ವ್ಯವಹಾರದ ಸಲುವಾಗಿ ಅವರಿಂದ ದಿನಾಂಕ: 19.05.2024 ರಂದು 49,000/- ರೂಪಾಯಿಗಳನ್ನು ಸಾಲವಾಗಿ ಪಡೆದಿದ್ದು, ಸದರಿ ಹಣದ ಮರುಪಾವತಿಗಾಗಿ ನಿಮ್ಮ ಖಾತೆ ಹೊಂದಿರುವ ಸ್ಟೇಟ್ ಬ್ಯಾಂಕ್ ಆಫ್ ಇಂಡಿಯಾ, ಮೂಡಿಗೆರೆ ಶಾಖೆಯ ಚೆಕ್ ಸಂಖ್ಯೆ: 343742, ದಿನಾಂಕ 29.11.2024, ರೂ.49,000/- ಎಂದು ನಮೂದಿಸಿ ನೀಡಿದ್ದು, ಸದರಿ ಚೆಕ್ ಅನ್ನು ಫಿರ್ಯಾದಿಯು ಬ್ಯಾಂಕ್ ಆಫ್ ಬರೋಡಾ, ಬಿಳಗುಳ ಶಾಖೆಯಲ್ಲಿ ಜಮೆಗಾಗಿ ಸಲ್ಲಿಸಿದಾಗ, ನಿಮ್ಮ ಖಾತೆಯಲ್ಲಿ ಸಾಕಷ್ಟು ಹಣವಿಲ್ಲ (Funds Insufficient) ಎಂದು ಹಿಂಬರಹ ನೀಡಿರುತ್ತಾರೆ. ಕಾರಣ, ಫಿರ್ಯಾದಿಯು ದಿನಾಂಕ 16.12.2024 ರಂದು ನೋಟೀಸ್ ಮೂಲಕ ಆರೋಪಿಯಾದ ನಿಮಗೆ ಸದರಿ ವಿಚಾರವನ್ನು ತಿಳಿಸಿದರೂ ಸಹ ನೀವು ಹಣವನ್ನು ವಾಪಸ್ ಮಾಡಿರುವುದಿಲ್ಲ. ಈ ರೀತ್ಯಾ ನೀವು ನೆಗೋಷಿಬಲ್

ಇನ್ಸ್ಟ್ರುಮೆಂಟ್ ಆಕ್ಟ್ ಕಲಂ **138** ರಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ಮಾಡಿರುವಿರಿ ಎಂದು ಆಪಾದಿಸಲಾಗಿದೆ?

ಪ್ರಃ 1. ಈಗ ಮೇಲೆ ಓದಿ ಹೇಳಿದ ಆಪಾದನೆಯನ್ನು ಕೇಳಿದ್ದೀರಾ? ಅದು ನಿಮಗೆ ಅರ್ಥವಾಯಿತೇ?

ಆರೋಪಿಯ ಉತ್ತರಃ

ಪ್ರಃ 2. ನೀವು ಆಪಾದನೆಯನ್ನು ಒಪ್ಪಿಕೊಳ್ಳುವಿರೋ ಅಥವಾ ವಿಚಾರಣೆಯಾಗಬೇಕೋ?

ಆರೋಪಿಯ ಉತ್ತರಃ

(ದಿನಾಂಕ 10.12.2025 ರಂದು ಆಪಾದನೆಯ ಸಾರಾಂಶವನ್ನು ಆರೋಪಿಗೆ ತಿಳಿಯುವ ಭಾಷೆಯಲ್ಲಿ ಓದಿ, ಅವರ ಹೇಳಿಕೆಯನ್ನು ನನ್ನ ಸಮಕ್ಷಮದಲ್ಲಿ ಬರೆದುಕೊಳ್ಳಲಾಯಿತು. ಅದು ಸತ್ಯವಾಗಿಯೂ ಮತ್ತು ಸರಿಯಾಗಿಯೂ ಇರುತ್ತದೆ ಅಂತಾ ಪ್ರಮಾಣೀಕರಿಸುತ್ತೇನೆ)

ಸಹಿ/-

ಮೂಡಿಗೆರೆ
ದಿನಾಂಕಃ 10.12.2025

ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು
ಜೆ.ಎಂ.ಎಫ್.ಸಿ, ಮೂಡಿಗೆರೆ.